**ಶ್ರೀ ಮರಿತಿಬ್ಬೇಗೌಡ ಮಾನ್ಯ ವಿಧಾನ ಪರಿಷತ್ತು ಸದಸ್ಯರು ಇವರು ನಿಯಮ 330 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.** (16)

**ಸೂಚನೆ:** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಬೋಧಕ/ಬೋಧಕೇತರ ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ ಇ.ಜಿ.ಐ.ಎಸ್. ಡಿ.ಸಿ.ಆರ್.ಜಿ. ಜ್ಯೋತಿ ಸಂಜೀವಿನಿ ಮುಂತಾದ ಸೌಲಭ್ಯಗಳನ್ನು ನೀಡದೆ ಇರುವುದು ಹಾಗೂ ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾಡದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

****

**ಉತ್ತರ:-** ಕರ್ನಾಟಕ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರಿಗೆ ಕೆ.ಜಿ.ಐ.ಡಿ ಸೌಲಭ್ಯ ನೀಡಲು ಆರ್ಥಿಕ ಇಲಾಖೆ ಒಪ್ಪಿರುವುದಿಲ್ಲ. ಕೆ.ಜಿ.ಐ.ಡಿ ಸೌಲಭ್ಯ ಇಲ್ಲದೇ ಇರುವ ಕಾರಣ ಇ.ಜಿ.ಐ.ಎಸ್ ಸೌಲಭ್ಯ ಅನ್ವಯಿಸುವುದಿಲ್ಲ.

ವಸತಿ ಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಖಾಯಂ ನೌಕರರಿಗೆ ಮರಣ ಉಪದಾನ **(DCRG)** ಸೌಲಭ್ಯ ವಿಸ್ತರಿಸುವ ಬಗ್ಗೆ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ. ಸಂಘದ ಖಾಯಂ ನೌಕರರ ಹಿತದೃಷ್ಟಿಯಿಂದ ದಿನಾಂಕ:01.08.2016 ರಿಂದ ಅನ್ವಯವಾಗುವಂತೆ ವಾರ್ಷಿಕ ಗುಂಪು ವಿಮೆ ಸೌಲಭ್ಯವನ್ನು ಕಲ್ಪಿಸಲಾಗಿದ್ದು, ಈವರೆಗೆ ಅರ್ಹರಿರುವ 14 ಮೃತರ ಕುಟುಂಬಕ್ಕೆ ಈ ಸೌಲಭ್ಯ ನೀಡಲಾಗಿರುತ್ತದೆ.

ಜ್ಯೋತಿ ಸಂಜೀವಿನಿ ಯೋಜನೆಯ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ರವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರೊಂದಿಗೆ ಸಮಾಲೋಚಿಸಿ ಸದರಿ ಸೌಲಭ್ಯವನ್ನು ವಿಸ್ತರಿಸುವ ಸಂಬಂಧ ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ. ಅದರಂತೆ ಕ್ರಮವಹಿಸಲಾಗುತ್ತಿದೆ.

ಸಂಘದ ವ್ಯಾಪ್ತಿಯ ಖಾಯಂ ನೌಕರರುಗಳಿಗೆ ಇತರೆ ಸರ್ಕಾರಿ ನೌಕರರುಗಳಿಗೆ ನೀಡುತ್ತಿರುವಂತೆ ವೈದ್ಯಕೀಯ ವೆಚ್ಚ ಮರುಪಾವತಿ, ಕಾಲಕಾಲಕ್ಕೆ ಸರ್ಕಾರದಿಂದ ನಿಗಧಿಪಡಿಸಿದ ವೇತನ ಶ್ರೇಣಿಯಂತೆ ವೇತನ ಬಡ್ತಿ ಹಾಗೂ ವೇತನ ಶ್ರೇಣಿ, ಗಳಿಕೆ ರಜೆ ನಗದೀಕರಣ ಸೌಲಭ್ಯ, ಮೃತಪಟ್ಟ ಖಾಯಂ ನೌಕರರ ಕುಟುಂಬದ ಸದ್ಯಸ್ಯರಿಗೆ ಅನುಕಂಪ ಆಧಾರದ ಮೇಲೆ ನಿಯಮಾನುಸಾರ ನೌಕರಿ ಹಾಗೂ ಇತ್ಯಾದಿ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ.

ವಸತಿ ಶಾಲಾ/ಕಾಲೇಜುಗಳ ನಿರ್ವಹಣೆ ಮತ್ತು ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಅಗತ್ಯವಾದ ಎಲ್ಲಾ ಕ್ರಮಗಳನ್ನು ಸಂಘದಿಂದ ತೆಗೆದುಕೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ಆಡಳಿತ ಮಂಡಳ ಮತ್ತು ಸರ್ಕಾರ ಕಾಲ-ಕಾಲಕ್ಕೆ ಶಿಕ್ಷಣ ಗುಣಮಟ್ಟವನ್ನು ಹೆಚ್ಚಿಸುವ ಕುರಿತು ಸೂಕ್ತ ನಿರ್ದೇಶನಗಳನ್ನು ನೀಡಿ ವಸತಿ ಶಾಲೆಗಳನ್ನು ಸುಸೂತ್ರವಾಗಿ ನಡೆಸಲು ಕ್ರಮಜರುಗಿಸಲಾಗುತ್ತಿದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ಕಲ್ಪಿಸುವುದರೊಂದಿಗೆ, ಸದರಿ ಸಂಘದ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ವೇತನ, ಇಂಕ್ರಿಮೆಂಟ್, ರಜೆ, ಅನುಕಂಪದ ನೇಮಕಾತಿ, ವೈದ್ಯಕೀಯ ವೆಚ್ಚ ಮರುಪಾವತಿ ಇತ್ಯಾದಿಗಳನ್ನು ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯವನ್ನಾಗಿ ಮಾರ್ಪಡಿಸುವ ಅವಶ್ಯಕತೆ ಕಂಡುಬರುವುದಿಲ್ಲ.

**ಕಡತ ಸಂಖ್ಯೆ: ಸಕಇ 22 ಮೊದೇಶಾ 2021**

**(ಬಿ.ಶ್ರೀರಾಮುಲು)**

**ಸಮಾಜ ಕಲ್ಯಾಣ ಇಲಾಖಾ ಸಚಿವರು.**